ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರ.ದ.ನ್ಯಾ.ದಂ., ರವರ ನ್ಯಾಯಾಲಯದಲ್ಲಿ, ತರೀಕೆರೆ.

ಸಿಸಿ ನಂಬರ್ **1246 /2023**

| | | |
|---|---|---|
| ಸಾಕ್ಷಿಯ ಹೆಸರು | : ಶಿವಮೂರ್ತಿ | ಸಿ.ಡಬ್ಲ್ಯು 2 |
| ತಂದೆಯ ಹೆಸರು | : ಸಿದ್ದಲಿಂಗಪ್ಪ | ಪಿ.ಡಬ್ಲ್ಯು 2 |
| ವಯಸ್ಸು | : 54 ವರ್ಷ | |
| ಉದ್ಯೋಗ | : ವ್ಯವಸಾಯ | |
| ವಾಸ ಸ್ಥಳ | : ಹಳಿಯೂರು | |

ದಿನಾಂಕಃ**12-08-2024** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು

ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃ-

ಆರೋಪಿಯ ಮತ್ತು ಚಾಸಾ-3 ರವರ ಪರಿಚಯ ಇರುವುದಿಲ್ಲ. ನನ್ನ ಸಹಿಯನ್ನು ನೋಡಿದರೆ ಗುರುತಿಸಬಲ್ಲೆ. ಸಾಕ್ಷಿಯು ನಿ.ಪಿ-1 ರ ಮೇಲಿನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿ.ಪಿ-1(ಬಿ) ಎಂದು ಗುರುತಿಸಲಾಯಿತು. ಸದರಿ ದಾಖಲೆಗೆ ಯಾವಾಗ, ಎಲ್ಲಿ ಮತ್ತು ಏತಕ್ಕಾಗಿ ಸಹಿ ಮಾಡಿದ್ದೇನೆ ಎಂದು ನನಗೆ ನೆನಪಿಲ್ಲ. ನನ್ನ ಸಮಕ್ಷಮ ಪೊಲೀಸರು ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆ ಕೊಟ್ಟಿಲ್ಲ, ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ.

**(**ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು**)**

ಪಾಟೀ ಸವಾಲುಃ ಮಾನ್ಯ ಸ.ಸ.ಅ.ರವರಿಂದಃ-

ದಿಃ20-09-2022 ರಂದು ಪೊಲೀಸರು ತಮಗೆ ಬಂದ ದಾಳಿಯ ಅನ್ವಯ ಹಳಿಯಾರು ರಸ್ತೆಯ ರೈಲ್ವೇಗೇಟ್ ಹತ್ತಿರ ನಾನು ಮತ್ತು ಚಾಸಾ-3 ರವರು ನಿಂತುಕೊಂಡಿದ್ದಾಗ, ನಮಗೆ ಪಂಚರಾಗುವಂತೆ ಕೇಳಿಕೊಂಡರು, ನಾವು ಒಪ್ಪಿಕೊಂಡ ಮೇರೆಗೆ ನಮ್ಮನ್ನು ಆರೋಪಿಯ ಮನೆಯ ಹತ್ತಿರ ಕರೆದುಕೊಂಡು ಹೋದರು ಎಂದರೆ ಸರಿಯಲ್ಲ. ಆ ಸಮಯದಲ್ಲಿ ಅರೋಪಿಯು ಅಕ್ರಮವಾಗಿ ಮದ್ಯವನ್ನು ಸಂಗ್ರಹಿಸಿ ಮಾರಾಟ ಮಾಡುತ್ತಿರುವುದನ್ನು ಗಮನಿಸಿ ದಾಳಿ ಮಾಡಿ ಆತನ ಕಡೆಯಿಂದ 90 ಎಂ.ಎಲ್ ನ 23 ಓಸಿ ವಿಸ್ಕಿ ಮತ್ತು 7 ಹೈವೇ ಡೀಲಕ್ಸ್ ವಿಸ್ಕಿಯ ಟೆಟ್ರಾ ಪ್ಯಾಕೇಟುಗಳನ್ನು ಅಮಾನತ್ತು ಮಾಡಿಕೊಂಡು ಸ್ಥಳದಲ್ಲಿ ಪಂಚನಾಮೆ ಬರೆದು ನಿ.ಪಿ-1 ಕ್ಕೆ ನಮ್ಮ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಪ್ರಕರಣದ ಬಗ್ಗೆ ಮಾಹಿತಿ ಇದ್ದರೂ ಕೂಡ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ, ದಿಃ 21-09-2022 ರಂದು ಈ ಬಗ್ಗೆ ಪೊಲೀಸರಿಗೆ ಹೇಳಿಕೆ ಕೂಡ ಕೊಟ್ಟಿದ್ದೇನೆ ಎಂದರೆ

ಸರಿಯಲ್ಲ. ಸಾಕ್ಷಿಯು ಅಲ್ಲಗಳೆದ ಹೇಳಿಕೆಯನ್ನು ನಿ.ಪಿ-3 ಎಂದು ಗುರುತಿಸಲಾಯಿತು. ನಿ.ಪಿ-1, 3 ಮತ್ತು ಮು.ಮಾಲು-1 ರ ಬಗ್ಗೆ ನನಗೆ ಸಂಪೂರ್ಣ ಮಾಹಿತಿ ಇದೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ

ಇಲ್ಲವೆಂದು ತೆಗೆದುಕೊಳ್ಳಲಾಯಿತು.

ಮರುವಿಚಾರಣೆ : ಇಲ್ಲಃ

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)**

ಓ ಹೇ ಕೇ ಸ ಇ ಎ ಒ

ಸಹಿ/-

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ
ಪ್ರ.ದ.ನ್ಯಾ.ದಂ., ರವರ ನ್ಯಾಯಾಲಯ, ತರೀಕೆರೆ.